# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ ಮೈಸೂರು

ವಿಷಯ: 2020–21ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ಅಧ್ಯಕ್ಷರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈಸೂರು, ಇವರ ಪತ್ರ ಸಂಖ್ಯೆ ಡಿಪಿಇಎಸ್ಎಸ್/184/2020–21 ದಿನಾಂಕ 12.10.2020.
2. ಮಾನ್ಯ ಕುಲಪತಿಯವರ ಆದೇಶ ದಿನಾಂಕ 11.11.2020

** * **

## ಆದೇಶ ಸಂಖ್ಯೆ: ಇಟಿ9/173/2017–18 ದಿನಾಂಕ 12ನೇ ನವೆಂಬರ್ 2020.

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2020–21ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಕಂಡ ಅತಿಥಿ ಉಪನ್ಯಾಸಕರುಗಳನ್ನು ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಭರತ್‌ನಾಗ್ ಎ<br># 530, 3ನೇ ಕ್ರಾಸ್, 2ನೇ ಸ್ಟೇಜ್ ಹೆಬ್ಬಾಳ್ ಮೈಸೂರು – 570017 | ಬಿಪಿಎಡ್/ ಎಂಪಿಎಡ್ | 12 | ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ | 19,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸಂಬಂಧಪಟ್ಟ ಅಧ್ಯಯನ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಅಉನೇ/2012–13ನೇ ಪಾವಿ–1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2020–21ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಸಾಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದ ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.